Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

25.04.2025 14.30 hrs

<><*<><>*><>

<u>ಮುಖ್ಯಾಂಶಗಳು</u>

- ಬಾಹ್ಯಾಕಾಶ ವಿಜ್ಞಾನಿ, ಇಸ್ರೋದ ಮಾಜಿ ಮುಖ್ಯಸ್ಥರಾಗಿದ್ದ ಡಾ. ಕೆ. ಕಸ್ತೂರಿ ರಂಗನ್ ನಿಧನ;
- ದೆಹಲಿಯ ಸಂಸತ್ ಭವನದಲ್ಲಿ ಇದೇ ೩೦ರಂದು ಜಗಜ್ಯೋತಿ ಬಸವಣ್ಣನವರ ಜಯಂತಿ ಆಚರಣೆ - ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ
- ದೇಶಾದ್ಯಂತ ನಾಳೆ ಉದ್ಯೋಗ ಮೇಳ ಆಯೋಜನೆ; ಬೆಂಗಳೂರಿನ ಕಾರ್ಯಕ್ರಮಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಚಾಲನೆ
- ಇಂದು ವಿಶ್ವ ಮಲೇರಿಯಾ ದಿನ; ರಾಜ್ಯಾದ್ಯಂತ ಜಾಗೃತಿ ಕಾರ್ಯಕ್ರಮ

<><*<><>*><>

ಭಾರತೀಯ ಬಾಹ್ಯಾಕಾಶ ವಿಜ್ಞಾನಿ, ಇಸ್ರೋದ ಮುಖ್ಯಸ್ಥರಾಗಿದ್ದ ಡಾ. ಕೆ. ಕಸ್ತೂರಿ ರಂಗನ್ ಅವರು ಇಂದು ಬೆಳಗ್ಗೆ ತಮ್ಮ ಸ್ವಗೃಹದಲ್ಲಿ ನಿಧನರಾಗಿದ್ದಾರೆ. ಅವರಿಗೆ ೮೪ ವರ್ಷ ವಯಸ್ಸಾಗಿತ್ತು. ಅವರು ಭಾರತ ಸರ್ಕಾರದ ಪದ್ಮಶ್ರೀ, ಪದ್ಮಭೂಷಣ, ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದ ಅವರು, ರಾಷ್ಟ್ರೀಯ ಶಿಕ್ಷಣ ನೀತಿಯ ಹಿಂದಿನ ಪ್ರಮುಖ ಶಕ್ತಿಯಾಗಿದ್ದರು. ಕಸ್ತೂರಿ ರಂಗನ್ ಅವರು ನವದೆಹಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯ, ರಾಜಸ್ತಾನದ ಸೆಂಟ್ರಲ್ ಯೂನಿವರ್ಸಿಟಿ ಹಾಗೂ ಎನ್ಐಐಟಿ ವಿಶ್ವವಿದ್ಯಾನಿಲಯಗಳ ಕುಲಪತಿಗಳಾಗಿದ್ದರು. ಅವರು ಕರ್ನಾಟಕ ಜ್ಞಾನ ಆಯೋಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು. ರಾಜ್ಯಸಭಾ ಸದಸ್ಯರೂ ಆಗಿದ್ದ ಅವರು, ಭಾರತೀಯ ಯೋಜನಾ ಆಯೋಗದ ಸದಸ್ಯರಾಗಿದ್ದರು. ಪಶ್ಚಿಮಘಟ್ಟದ ಸಂರಕ್ಷಣೆ ಕುರಿತ ಕಸ್ತೂರಿ ರಂಗನ್ ವರದಿಯಿಂದ ಅವರು ಜನಜನಿತರಾಗಿದ್ದರು. ಬೆಂಗಳೂರಿನ ರಾಮನ್ ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಭಾನುವಾರ ಬೆಳಗ್ಗೆ ೧೦ ರಿಂದ ೧೨ರ ವರೆಗೆ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕಾಗಿ ವ್ಯವಸ್ಥೆ ಮಾಡಲಾಗಿದೆ.

<><*<><>*><>

ದೆಹಲಿಯ ಸಂಸದ ಭವನದಲ್ಲಿ ಬರುವ ಏಪ್ರಿಲ್ ೩೦ರಂದು ಜಗಜ್ಯೋತಿ ಬಸವಣ್ಣನವರ ಜಯಂತಿಯನ್ನು ಆಚರಿಸಲಾಗುವುದು ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಏರ್ಪಡಿಸಿ ಮಾತನಾಡಿದ ಅವರು, ಲೋಕಸಭೆಯ ಅಧ್ಯಕ್ಷರಾದ ಓಂ ಬಿರ್ಲಾ, ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಪ್ರಲ್ಹಾದ್ ಜೋಶಿ, ನಿರ್ಮಲಾ ಸೀತಾರಾಮನ್ ಸೇರಿದಂತೆ ಹಲವು ಗಣ್ಯರನ್ನು ಜಯಂತಿ ಸಮಾರಂಭದಲ್ಲಿ ಭಾಗವಹಿಸುವಂತೆ ಆಹ್ವಾನಿಸಲಾಗಿದೆ ಎಂದು ಅವರು ತಿಳಿಸಿದರು. ಜಗಜ್ಯೋತಿ ಬಸವಣ್ಣನವರ ತತ್ವ ಸಿದ್ಧಾಂತಗಳು ಎಲ್ಲೆಡೆ ಪ್ರಚುರಪಡಿಸಲು ತಾವು ಸತತ ಪ್ರಯತ್ನ ಮಾಡುವ ಭಾಗವಾಗಿ ಸಂಸತ್ತಿನಲ್ಲಿ ಜಯಂತಿ ಆಚರಿಸುವ ಪ್ರಯತ್ನ ಮಾಡಲಾಯಿತು. ಅವರ ವಚನಗಳು ಸದನದಲ್ಲಿ ಲಿಖಿತ ರೂಪದಲ್ಲಿ ಮೂಡಬೇಕು ಮತ್ತು ಪುತ್ಥಳಿ ಅನಾವರಣವಾಗಬೇಕು ಎಂಬ ಹೆಬ್ಬಯಕೆ ತಮ್ಮದಾಗಿದೆ. ಕರ್ನಾಟಕ ರಾಜ್ಯದಲ್ಲಿ ಜಗಜ್ಯೋತಿ ಬಸವಣ್ಣನವರ ಹೆಸರಿನಲ್ಲಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಬೇಕು ಎಂಬ

ಬಯಕೆಯೂ ತಮ್ಮದಾಗಿದೆ ಎಂದು ತಿಳಿಸಿದರು. ರೈಲ್ವೆ ಇಲಾಖೆಗೆ ಸಂಬಂಧಿಸಿದಂತೆ ಮಾಹಿತಿ ನೀಡಿದ ಅವರು, ಯುಪಿಎ ಸರ್ಕಾರವಿದ್ದಾಗ ರೈಲ್ವೆ ಯೋಜನೆಗಳಿಗೆ ೮೩೩ ಕೋಟಿ ಅನುದಾನವನ್ನು ಕರ್ನಾಟಕಕ್ಕೆ ನೀಡಲಾಗುತ್ತಿತ್ತು. ಈಗಿನ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಅನುದಾನವನ್ನು ೫ ಸಾವಿರದ ೫೦೦ ಕೋಟಿ ರೂಪಾಯಿಗೆ ಹೆಚ್ಚಿಸಿದೆ. ನೆನಗುದಿಗೆ ಬಿದ್ದಿದ್ದ ೧೧ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಯಶವಂತಪುರ ರೈಲ್ವೆ ನಿಲ್ದಾಣ ಸೇರಿದಂತೆ ಬೆಂಗಳೂರಿನ ವಿವಿಧ ರೈಲ್ವೆ ನಿಲ್ದಾಣಗಳ ಆಧುನೀಕರಣ ಯೋಜನೆ ಜಾರಿಯಲ್ಲಿದೆ. ವಿಮಾನ ನಿಲ್ದಾಣಕ್ಕೆ ರೈಲ್ವೆ ಸಂಪರ್ಕ, ಸಬರ್‌ಬನ್ ರೈಲು, ವರ್ತುಲ ರೈಲು ಹೀಗೆ ಬೆಂಗಳೂರಿನಲ್ಲಿ ಹಲವಾರು ರೈಲ್ವೆ ಯೋಜನೆಗಳು ಜಾರಿಯಲ್ಲಿವೆ. ಜಾತಿಗಣತಿ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಭಾವನೆಗಳೊಂದಿಗೆ ಆಟವಾಡುವುದು ತರವಲ್ಲ ಎಂದ ಅವರು, ಜಾತಿಗಣತಿ ವರದಿಯಿಂದ ರಾಜ್ಯ ಅವ್ಯವಸ್ಥೆಯ ಆಗರವಾಗಿದೆ. ಇದನ್ನು ತಿರಸ್ಕರಿವುದು ಉತ್ತಮ ಎಂದರು.

<><*<><>*><>

ದೇಶಾದ್ಯಂತ ನಾಳೆ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ. ಈ ಸಂಬಂಧ ಬೆಂಗಳೂರಿನಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ. ಬೆಂಗಳೂರು ಪಶ್ಚಿಮ ಆಯುಕ್ತಾಲಯದ ಜಿಎಸ್‌ಟಿ ಕೇಂದ್ರ ತೆರಿಗೆ ವಿಭಾಗದ ವತಿಯಿಂದ ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ಕಸ್ಟಮ್ಸ್ ಪರೋಕ್ಷ ತೆರಿಗೆ ಮತ್ತು ಮಾದಕ ದ್ರವ್ಯಗಳ ರಾಷ್ಟ್ರೀಯ ಸಂಸ್ಥೆಯ ಆವರಣದಲ್ಲಿ ನಾಳೆ ೧೫ನೇ ಆವೃತ್ತಿಯ ಉದ್ಯೋಗ ಮೇಳ ಆಯೋಜಿಸಲಾಗಿದೆ.ಈ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ವರ್ಚುವಲ್ ಮೂಲಕ ಪಾಲ್ಗೊಂಡು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಸಚಿವರು, ಸಂಸದರು, ಶಾಸಕರು, ಕೇಂದ್ರ ಸರ್ಕಾರದ ಇಲಾಖೆ ಹಾಗೂ ಸಂಸ್ಥೆಗಳ ಅಧಿಕಾರಿಗಳು, ನೂತನವಾಗಿ ನೇಮಕಗೊಂಡ ಅಭ್ಯರ್ಥಿಗಳು ಸೇರಿದಂತೆ ಸುಮಾರು ೪೦೦ ಜನರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಡಿದ್ದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಬಾರಿಯ ಮನ್ ಕಿ ಬಾತ್‌ಗೆ ಸಾರ್ವಜನಿಕರಿಂದ ಅನಿಸಿಕೆ, ಅಭಿಪ್ರಾಯಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಅಥವಾ ಒಥಿಉov.iಟಿ ಮೂಲಕ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಲು ಇಂದು ಕೊನೆಯ ದಿನವಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಇಂದು ವಿಶ್ವ ಮಲೇರಿಯಾ ದಿನ. ಮಲೇರಿಯಾ ಬಗ್ಗೆ ಜಾಗೃತಿ ಮೂಡಿಸಲು ಮತ್ತು ರೋಗವನ್ನು ನಿಯಂತ್ರಿಸುವ ಸಲುವಾಗಿ ವಿಶ್ವ ಆರೋಗ್ಯ ಸಂಸ್ಥೆ-ಡಬ್ಲ್ಯೂಎಚ್‌ಒ ಹಲವು ಜಾಗತಿಕ ಉಪಕ್ರಮಗಳನ್ನು ಕೈಗೆತ್ತಿಕೊಂಡಿದೆ. "ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ ಮರುಹೂಡಿಕೆ ಮಾಡಿ, ಮರುಕಲ್ಪಿಸಿಕೊಳ್ಳಿ, ಪುನರುಜ್ಜೀವನಗೊಳಿಸಿ" ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. ಮಲೇರಿಯಾ ದಿನದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಹಲವಾರು ಕಾರ್ಯಕ್ರಮಗಳು

ನಡೆಯತ್ತಿವೆ. ಚಿತ್ರದುರ್ಗ ಜಿಲ್ಲೆಯಲ್ಲಿ ಜಿಲ್ಲಾ ಆರೋಗ್ಯ ಇಲಾಖೆ ಸಹಯೋಗದೊಂದಿಗೆ ವಿಶ್ವ ಮಲೇರಿಯಾ ದಿನದ ಪ್ರಯುಕ್ತ ಜನ ಜಾಗೃತಿ ಜಾಥಾಕ್ಕೆ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಚಾಲನೆ ನೀಡಿದರು.

<><*<><>*><>

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ. ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ ದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಲಾಗಿದೆ. ಈ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಶೇಖರಿಸಲು ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ. ಜಿಲ್ಲಾ ಮಟ್ಟದ ಸಮನ್ವಯ ಸಮಿತಿಗಳು ಪರಿಶಿಷ್ಟ ಜಾತಿಯ ಕುಟುಂಬಗಳ ಸಮೀಕ್ಷೆಯನ್ನು ಯಾವುದೇ ಲೋಪವಿಲ್ಲದೇ ಯಶಸ್ವಿಯಾಗಿ ನಡೆಸಲು ಮೇಲುಸ್ತುವಾರಿ ಜವಾಬ್ದಾರಿ ವಹಿಸಿಕೊಂಡು ನಿಗದಿತ ಅವಧಿಯಲ್ಲಿ ಸಮೀಕ್ಷೆ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಪರಿಶಿಷ್ಟ ಜಾತಿಯ ಕುಟುಂಬಗಳ ಸಮೀಕ್ಷೆಯನ್ನು ಮನೆ ಮನೆ ಸಮೀಕ್ಷೆ, ವಿಶೇಷ ಶಿಬಿರಗಳ ಮೂಲಕ ಹಾಗೂ ಆನ್ ಲೈನ್‌ನಲ್ಲಿ ಸ್ವಯಂ ಘೋಷಣೆ ಮೂಲಕ ೩ ಹಂತಗಳಲ್ಲಿ ನಡೆಸಲಾಗುತ್ತದೆ ಎಂದು ಮೈಸೂರು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಯುಕೇಶ್ ಕುಮಾರ್ ಹೇಳಿದ್ದಾರೆ. ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಂಬಂಧ ರಚಿಸಲಾಗಿರುವ ಎಚ್.ಎನ್. ನಾಗಮೋಹನ್ ದಾಸ್ ಸಮಿತಿಯ ಸಮೀಕ್ಷೆ ಸಂಬಂಧ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರಿಶಿಷ್ಟ ಜಾತಿಯಲ್ಲಿ ೧೦೧ ಉಪ ಜಾತಿಗಳನ್ನು ಗುರುತಿಸಲಾಗಿದೆ. ಮೂರು ಹಂತಗಳಲ್ಲಿ ಆಗಬೇಕಿರುವ ಸಮೀಕ್ಷೆ. ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್‌ನ್ನು ಆಯ್ಕೆ ಮಾಡಿ ತರಬೇತಿಗೆ ರಾಜ್ಯ ಮಟ್ಟಕ್ಕೆ ಕಳುಹಿಸಲಾಗಿದೆ. ಮೇ ೦೫ ರಿಂದ ೧೭ ವರೆಗೆ ಮನೆ ಮನೆ ಬೇಟಿ ನೀಡಿ ಸಮೀಕ್ಷೆ ಮಾಡಲಾಗುತ್ತಿದೆ. ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳನ್ನು ಮೇ ೧೯ ರಿಂದ ಮೇ ೨೧ ರವರೆಗೆ ಹಾಗೂ ಆನ್ ಲೈನ್ ಮೂಲಕ ಸ್ವಯಂ ಘೋಷಣೆಯನ್ನು ಮೇ ೧೯ ರಿಂದ ಮೇ ೨೩ ರವರೆಗೆ ನಡೆಸಲಾಗುತ್ತಿದೆ. ಇಲ್ಲಿ ಪರಿಶಿಷ್ಟ ಜಾತಿಯ ಜನರ ಸಮೀಕ್ಷೆಯನ್ನು ಮಾತ್ರ ನಡೆಸಲಾಗುತ್ತದೆ. ಶಿಕ್ಷಕರು ಸಮೀಕ್ಷೆಗೆ ಮನೆಗೆ ಬಂದಾಗ ಅಗತ್ಯ ಮಾಹಿತಿಯನ್ನು ನೀಡಬೇಕು ಎಂದು ತಿಳಿಸಿದ್ದಾರೆ.

<><*<><>*><>

ರೈಲ್ವೆ ಇಲಾಖೆಯಲ್ಲಿ ಲೋಕೋ ಪೈಲಟ್‌ಗಳ ಪಾತ್ರ ಬಹುಮುಖ್ಯವಾಗಿದೆ. ಪ್ರಯಾಣಿಕರು ಮತ್ತು ಸರಕುಗಳ ಸುರಕ್ಷತೆ ಜೊತೆಗೆ ದೇಶದ ಆರ್ಥಿಕತೆಗೆ ಅವರ ಕೊಡುಗೆ ಮಹತ್ವದಾಗಿದೆ. ರೈಲ್ವೆ ಇಲಾಖೆಯ ಹುಬ್ಬಳ್ಳಿ ವಿಭಾಗೀಯ ಹಿರಿಯ ಮೆಕ್ಯಾನಿಕಲ್ ಇಂಜಿನಿಯರ್ ಜೆ.ಎಸ್. ರುದ್ರಸ್ವಾಮಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕೋ ಫೈಲಟ್‌ಗಳ ವಿಶ್ರಾಂತಿ ಬಹಳ ಮುಖ್ಯವಾಗಿದೆ. ರೈಲುಗಳ ರಕ್ಷಣೆಗೆ ಇವರ ಪಾತ್ರ ಮಹತ್ವದು, ಕೇಂದ್ರ ಸ್ಥಾನದಿಂದ ಹೊರಗಡೆ ಬಂದಾಗ ಲೋಕೋ ಫೈಲಟ್‌ಗಳ ವಿಶ್ರಾಂತಿಗೆ ಆದ್ಯತೆ ನೀಡಲಾಗುತ್ತದೆ. ರನ್ನಿಂಗ್ ರೂಂ ೨೪ ಗಂಟೆ ಕೆಲಸ ಮಾಡುತ್ತದೆ. ಯಾವುದೇ ಸಂದರ್ಭದಲ್ಲಿ ಬಂದರೂ ಊಟ, ವಸತಿ ಜೊತೆಗೆ ಯೋಗ ಕೇಂದ್ರ ಇದೆ. ವಾಕಿಂಗ್ ಮಾಡುವುದರ ಜತೆಗೆ ಚೆಸ್, ಕೇರಂ ಕೂಡ ಇಡಲಾಗಿದ್ದು, ವಿಶ್ರಾಂತಿಗೆ ಆಗಮಿಸುವ ಸಿಬ್ಬಂದಿ ಈ ಎಲ್ಲಾ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

***    ಧ್ವನಿ**** ಜೆ ಎಸ್ ರುದ್ರಸ್ವಾಮಿ

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಕ್ಷೇತ್ರದ ಮಾಜಿ ಶಾಸಕ, ಕಾಂಗ್ರೆಸ್ ಪಕ್ಷದ ಹಿರಿಯ ರಾಜಕಾರಣಿ ಬೇಗಾನೆ ರಾಮಯ್ಯ ಅವರು ಅನಾರೋಗ್ಯದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿನ್ನೆ ನಿಧನರಾಗಿದ್ದಾರೆ. ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದ ಅವರು ಕಳೆದ ಒಂದು ವಾರದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರ ಆಪ್ತರಾಗಿದ್ದ ಅವರು ೧೯೭೮ರಲ್ಲಿ ಶೃಂಗೇರಿ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಶಾಸಕರಾಗಿ ಆಯ್ಕೆಯಾಗಿದ್ದರು. ಹಾಗೂ ಗ್ರಾಮೀಣಾಭಿವೃದ್ಧಿ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಸಚಿವ ಮಧು ಬಂಗಾರಪ್ಪ ಸೇರಿದಂತೆ ಅನೇಕ ಗಣ್ಯರು ಬೇಗಾನೆ ರಾಮಯ್ಯ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>